## <u>ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ</u>

## <u>ಸಿ.ಸಿ. ಸಂಖ್ಯೆ: **790/2025**</u>

<u>ಪಿರ್ಯಾದಿ</u> : ರಾಜ್ಯ, ಪರವಾಗಿ ಬಣಕಲ್ ಪೊಲೀಸ್ ಠಾಣೆ,
ಬಣಕಲ್.

ವಿರುದ್ಧ

<u>ಆರೋಪಿ</u> : ಲೋಕೇಶ ಎನ್, ವಯಸ್ಸು ಸುಮಾರು 45 ವರ್ಷ,
ಬಿನ್ ದಿ: ನೀಲಯ್ಯ,
ವಾಸ: ಹಳೇಕೋಟೆ ಗ್ರಾಮ, ಕಸಬಾ ಹೋಬಳಿ,
ಮೂಡಿಗೆರೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.

### <u>ದೋಷಾರೋಪಣೆ</u>

ಶ್ರೀಮತಿ ಸುರಕ್ಷ ಕೆ.ಕೆ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆಗಳು ಏನೆಂದರೆ:-

ಮೂಡಿಗೆರೆ ತಾಲ್ಲೂಕು ಬಣಕಲ್ ಪೋಲಿಸ್ ಠಾಣಾ ವ್ಯಾಪ್ತಿಯ, ಜಾರಗಲ್ ಬೆಟ್ಟಗೆರೆ ಗ್ರಾಮದ ವಾಸಿ ಚಾಸಾ-1 ಶ್ರೀಮತಿ ವಾರೀಜ ರವರು ದಿನಾಂಕ: 12.06.2024 ರಂದು ಬೆಳಗ್ಗೆ 8.30 ರ ಸಮಯದಲ್ಲಿ ತಮ್ಮ ಮನೆಗೆ ಬೀಗ ಹಾಕಿಕೊಂಡು ಕೂಲಿ ಕೆಲಸಕ್ಕೆ ಹೋಗಿದ್ದು, ನಂತರ ಆರೋಪಿಯಾದ ನೀವು ಅದೇ ದಿನ ಬೆಳಗ್ಗೆ 10.30 ರ ಸಮಯದಲ್ಲಿ ಕಬ್ಬಿಣದ ರಾಡಿನಿಂದ ಚಾಸಾ-1 ರವರ ಮನೆಯ ಮುಂಬಾಗಿಲಿಗೆ ಹಾಕಿದ್ದ ಬೀಗವನ್ನು ಮೀಟಿ ತೆಗೆದು, ಬೀಗವನ್ನು ಎಸೆದು, ಮನೆಯೊಳಗೆ ಪ್ರವೇಶ ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **454** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**2**. ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಮುಂದುವರೆದು ಚಾಸಾ1 ರವರ ಮನೆಯ ಒಳಗೆ ಪ್ರವೇಶ ಮಾಡಿ, ಸದರಿ ಮನೆಯ ನಡುಮನೆ ಹಾಲ್‌ನಲ್ಲಿದ್ದ ಗಾಡ್ರೇಜ್ ಬೀರುವಿನ ಡೋರ್ ನ್ನು ಅದೇ ಕಬ್ಬಿಣದ ರಾಡಿನಿಂದ ಮೀಟಿ ತೆಗೆದು, ಬೀರುವಿನೊಳಗೆ ಇಟ್ಟಿದ್ದ ಸೀಕ್ರೇಟ್ ಲಾಕ್ ನ ಕೀ ಸಹಾಯದಿಂದ ಸೀಕ್ರೇಟ್ ಲಾಕರ್ ನ್ನು ತೆಗೆದು, ಅದರಲ್ಲಿದ್ದ ಸುಮಾರು ರೂ.1,25,550/- ಬೆಲೆಯ 21.650 ಗ್ರಾಂ ತೂಕದ ಬಂಗಾರದ ನಕ್ಲೇಸ್ ನ್ನು ಮತ್ತು ಸುಮಾರು ರೂ.35,040/- ಬೆಲೆಯ 6 ಗ್ರಾಂ ತೂಕದ ಬಂಗಾರದ ಒಂದು ಜೊತೆ ಓಲೆಯನ್ನು ಹಾಗೂ ಬೀರುವಿನ ಪಕ್ಕ ಮರದ ಟೇಬಲ್ ಡ್ರಾದಲ್ಲಿದ್ದ ರೂ.1,500/- ಹಣವನ್ನು ಕಳ್ಳತನ ಮಾಡಿಕೊಂಡು ಹೋಗಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು

ಭಾರತ ದಂಡ ಸಂಹಿತೆ ಕಲಂ **380** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಮಾಡಿದ್ದರಿಂದ**,** ಅವುಗಳು ಈ ನ್ಯಾಯಾಲಯದಿಂದ ವಿಚಾರಣೆಯಾಗತಕ್ಕದೆಂದು ಆದೇಶಿಸಲಾಗಿದೆ**.**

ಪ್ರ: 1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದ್ದೀರಾ**?** ಅವುಗಳು ನಿಮಗೆ ಅರ್ಥವಾಯಿತೇ**?**

ಆರೋಪಿಯ ಉತ್ತರ:

ಪ್ರ: 2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ**?**

ಆರೋಪಿಯ ಉತ್ತರ:

**(**ಆರೋಪಿಗೆ ದಿನಾಂಕ 02.07.2025 ರಂದು ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ**,** ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು**.** ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ**)**

ಸಹಿ**/-**

ಮೂಡಿಗೆರೆ
ದಿನಾಂಕ: 02.07.2025

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ.